# ಪಿಎಫ್‌ಐ-ಎಸ್‌ಡಿಪಿಐ ನಿಷೇಧ

18/11/22

ಬೆಂಗಳೂರು: ರಾಜ್ಯದಲ್ಲಿ ಉಗ್ರಗಾಮಿ ಚಟುವಟಿಕೆಯಲ್ಲಿ ತೊಡಗಿರುವ ಎಸ್‌ಡಿಪಿಐ ಹಾಗೂ ಪಿಎಫ್‌ಐ ಸಂಘಟನೆಗಳನ್ನು ನಿಷೇಧಿಸಲು ಸರ್ಕಾರ ಮುಂದಾಗಿದೆ.

ಮುಖ್ಯಮಂತ್ರಿ ಯಡಿಯೂರಪ್ಪ ನೇತೃತ್ವದಲ್ಲಿ ಶುಕ್ರವಾರ ನಡೆದ ಸಂಪುಟ ಸಭೆಯಲ್ಲಿ ಈ ತೀರ್ಮಾನ ಕೈಗೊಳ್ಳಲಾಗಿದ್ದು, ಇದಕ್ಕೆ ಅಗತ್ಯವಾದ ಪೂರಕ ಕ್ರಮಗಳನ್ನು ಕೈಗೊಳ್ಳಲು ಪೊಲೀಸರಿಗೆ ಆದೇಶಿಸಲಾಗಿದೆ. ಅದು ಮುಗಿದ ನಂತರ ಕೇಂದ್ರ ಸರ್ಕಾರಕ್ಕೆ ವರದಿ ಸಲ್ಲಿಸಿ ನಿಷೇಧಕ್ಕೆ ಕಾನೂನಾತ್ಮಕ ಕ್ರಮ ಕೈಗೊಳ್ಳಲಾಗುವುದು ಎಂದು ಗೃಹ ಸಚಿವ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ.


ಸಂಸದ ತೇಜಸ್ವಿ ಸೂರ್ಯ, ಚಕ್ರವರ್ತಿ ಸೂಲಿಬೆಲೆ ಹಾಗೂ ಮಾಜಿ ಸಚಿವ ತನ್ವೀರ್ ಸೇಠ್ ಹತ್ಯೆಗೆ ಈ ಸಂಘಟನೆಗಳು ನಡೆಸಿದ ಸಂಚನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ. ಈ ಸಂಘಟನೆಗಳನ್ನು ನಿಷೇಧಿಸುವ ಕ್ರಮವನ್ನು ಉತ್ತರ ಪ್ರದೇಶ ಈಗಾಗಲೇ ಆರಂಭಿಸಿದ್ದು ಅದೇ ಮಾದರಿ ಅನುಸರಿಸಲಾಗುತ್ತಿದೆ. ಹಿಂದೆ ಉಗ್ರಗಾಮಿ ಚಟುವಟಿಕೆಗಳಲ್ಲಿ ತೊಡಗಿದ್ದ ಸಿಮಿ ಸಂಘಟನೆಯನ್ನು ನಿಷೇಧಿಸಿದ್ದರೂ ಅವು ಬೇರೆ ಬೇರೆ ಹೆಸರಿನಲ್ಲಿ ಕಾರ್ಯನಿರ್ವಹಿಸುತ್ತಿವೆ ಎಂದರು.

ಈ ಎರಡೂ ಸಂಘಟನೆಗಳು ಕಳೆದ 7-8 ವರ್ಷಗಳಿಂದ ರಾಜ್ಯದಲ್ಲಿ ವ್ಯವಸ್ಥಿತವಾಗಿ ಹಿಂಸಾಚಾರ ನಡೆಸುತ್ತಿವೆ. ಇವುಗಳ ಮೇಲಿದ್ದ ಹಲವು ಪ್ರಕರಣಗಳನ್ನು ಹಿಂದಿನ ಸರ್ಕಾರ ಕೈಬಿಟ್ಟಿತು. ಇದರಿಂದ ಅವುಗಳ ಚಟುವಟಿಕೆಗಳಿಗೆ ಉತ್ತೇಜನ ಸಿಕ್ಕಿದಂತಾಯಿತು. ಹಳೆಯ ಪ್ರಕರಣಗಳಿಗೆ ಮರುಜೀವ ಕೊಡುವ ಬಗ್ಗೆಯೂ ಆಲೋಚನೆ ನಡೆಸಲಾಗುತ್ತಿದೆ. ಹಲವು ಗಂಭೀರ ಹಿಂಸಾಚಾರ ಪ್ರಕರಣಗಳಲ್ಲಿ ಈ ಸಂಘಟನೆಗಳು ತೊಡಗಿರುವುದು ಗೊತ್ತಾಗಿದೆ. ರಾಜ್ಯದ ಹೊರಗೆ ಹಾಗೂ ವಿದೇಶಗಳಿಂದಲೂ ಉಗ್ರಗಾಮಿ ಸಂಘಟನೆಗಳ ಸಂಪರ್ಕ ಇರುವುದು ಪೊಲೀಸ್ ತನಿಖೆಯಿಂದ ತಿಳಿದಿದೆ ಎಂದು ಹೇಳಿದರು.

ಈ ಸಂಘಟನೆಗಳನ್ನು ನಿಷೇಧಿಸಲು ಅಗತ್ಯವಾದ ಎಲ್ಲಾ ಕ್ರಮಗಳನ್ನು ಕೈಗೊಳ್ಳುವ ಕೆಲಸ ಪೊಲೀಸರು ಆರಂಭಿಸಿದ್ದಾರೆ. ಅಂತಿಮವಾಗಿ ಕಾನೂನು ಇಲಾಖೆ ಜತೆ ಸಮಾಲೋಚನೆ ನಡೆಸಿ ಕೇಂದ್ರಕ್ಕೆ ಶಿಫಾರಸು ಮಾಡಲಾಗುವುದು ಎಂದರು.

ಶುಕ್ರವಾರ ನಡೆದ ಸಂಪುಟ ಸಭೆಯಲ್ಲಿ ಈ ಸಂಘಟನೆಗಳನ್ನು ನಿಷೇಧಿಸಬೇಕು ಎನ್ನುವುದು ಪ್ರಮುಖವಾಗಿ ಚರ್ಚೆಗೆ ಒಳಗಾಯಿತು. ಸಂಸದ ತೇಜಸ್ವಿ ಸೂರ್ಯ, ಚಕ್ರವರ್ತಿ ಸೂಲಿಬೆಲೆ ಹತ್ಯೆ ಸಂಚಿನ ಹಿನ್ನೆಲೆಯಲ್ಲಿ ಆದಷ್ಟು ಬೇಗ ನಿಷೇಧ ಹೇರಬೇಕು. ರಾಜ್ಯದಲ್ಲಿ ಬೇರು ಬಿಡಲು ಅವಕಾಶ ನೀಡಬಾರದು ಎಂದು ಹಲವು ಸಚಿವರು ಆಗ್ರಹಿಸಿದರು.





- ನಿಷೇಧಕ್ಕೆ ಬಹುತೇಕ ಸಚಿವರ ಆಗ್ರಹ
- ದಾಖಲೆ ಸಂಗ್ರಹಕ್ಕೆ ಪೊಲೀಸರಿಗೆ ಆದೇಶ
- ಕಾನೂನು ಸಮಾಲೋಚನೆ ನಂತರ ಕೇಂದ್ರಕ್ಕೆ ಶಿಫಾರಸು

### [illegible]

- ಸರ್ಕಾರಿ ಜಮೀನು ಸಂರಕ್ಷಣೆ ಸಮಿತಿ ಪುನಾರಚನೆ
- ಆಶಾ ಕಾರ್ಯಕರ್ತೆಯರಿಗೆ 3 ಸಾವಿರ ರೂ. ಪ್ರೋತ್ಸಾಹ ಧನ
- ವಿಜಯಪುರ, ಕಲಬುರಗಿಯಲ್ಲಿ ಗರಿಷ್ಠ ಭದ್ರತಾ ಕಾರಾಗೃಹ
- ಹಾವೇರಿ, ಯಾದಗಿರಿಗೆ ವೈದ್ಯಕೀಯ ಕಾಲೇಜು
- ಚಿಕ್ಕಬಳ್ಳಾಪುರ ವೈದ್ಯಕೀಯ ಕಾಲೇಜಿಗೆ 508 ಕೋಟಿ ರೂ.
- ಜಿಲ್ಲಾ ಯೋಜನಾ ಸಮಿತಿಗೆ ಉಸ್ತುವಾರಿ ಸಚಿವರೇ ಅಧ್ಯಕ್ಷರು